# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯಪಾಲಕ ಅಭಿಯಂತರರ ಕಛೇರಿ ಕಟ್ಟಡ ಜಯಂತಿ ನಗರ ವೃತ್ತ ಹೊರಮಾವು/ಕಲ್ಕೆರೆ ಮುಖ್ಯರಸ್ತೆ,
ಹೊರಮಾವು ಗ್ರಾಮ, ಬೆಂಗಳೂರು- 560113

ಸಂಖ್ಯೆ.ಬಿಬಿಎಂಪಿ/ಸ.ಕಾ.ಅ/ಹೊಉವಿ/ಪಿಆರ್/ 12 /2022-23 ದಿನಾಂಕ: 22.06.2022

## ದಿನಾಂಕ-22.06.2022 ರಂದು ನಡೆದಿರುವ ವಿಜಿನಾಪುರ ವಾರ್ಡ್ ಸಂಖ್ಯೆ-51 ರ ವಾರ್ಡ್ ಸಮಿತಿ ಸಭೆ ನಡುವಳಿಗಳು

| | ಸದಸ್ಯರ ಹೆಸರು ಮತ್ತು ಪದನಾಮ | ಸದಸ್ಯರ ಹಾಜರು/ಗೈರು ಹಾಜರು |
|---|---|---|
| 1 | ಶ್ರೀಮತಿ.ತ್ರಿವೇಣಿ (ಅಧ್ಯಕ್ಷರು) | ಹಾಜರು |
| 2 | ಶ್ರೀ.ನಾಗಭೂಷಣ, ಸಹಾಯಕ ಅಭಿಯಂತರರು (ವಾರ್ಡ್ ನಂ.51) (ಕಾರ್ಯದರ್ಶಿ) | ಹಾಜರು |
| 3 | ಶ್ರೀ.ರಾಜಣ್ಣ (ಹಿ.ಆ.ಪ) ವಾರ್ಡ್ ನಂ.51 | ಹಾಜರು |
| 4 | ಶ್ರೀ.ಮಧು (ಕಿ.ಆ.ಪ) ವಾರ್ಡ್ ನಂ.51 | ಹಾಜರು |
| 5 | ಶ್ರೀ.ದಿನೇಶ್ ಸಹಾಯಕ ಅಭಿಯಂತರರು, (ಬಿ.ಡಬ್ಲ್ಯೂ.ಎಸ್.ಎಸ್.ಬಿ) | ಹಾಜರು |
| 6 | ಶ್ರೀ.ಮಂಜುನಾಥ ಬಡಿಗೇರ್ (ಕಂದಾಯ ಪರಿವೀಕ್ಷಕರು) | ಹಾಜರು |
| 7 | ಶ್ರೀ.ರಾಮಾಂಜಿನಪ್ಪ (ಪಿ.ಎಸ್.ಐ, ಟ್ರಾಫಿಕ್) | ಹಾಜರು |
| 8 | ಶ್ರೀ.ಡಿ.ವಿ.ಮೋಹನ್ ಲೈವ್ ಸ್ಟಾಕ್ ಆಫೀಸರ್ | ಹಾಜರು |
| 9 | ಶ್ರೀ.ರಾಜ.ಕೆ (ಬೆಸ್ಕಾಂ) | ಹಾಜರು |
| 10 | ಡಾ|| ಲೋಹಿತ್ (ಪಿ.ಹೆಚ್.ಸಿ) | ಹಾಜರು |
| 11 | ಶ್ರೀ. ವಿನಯ್ ಕುಮಾರ್ (ಪಿ.ಹೆಚ್.ಸಿ) | ಹಾಜರು |
| 12 | ಶ್ರೀ.ವೇಣುಗೋಪಾಲ್ ರೈ | ಹಾಜರು |
| 13 | ಶ್ರೀ.ರಾಮಚಂದ್ರ (ಅಂಬೇಡ್ಕರ್ ನಗರ) | ಹಾಜರು |
| 14 | ಶ್ರೀ.ಶಿವರಾಮನ್ (ಬಿ.ಡಿ.ಎ ಲೇಔಟ್) | ಹಾಜರು |
| 15 | ಶ್ರೀ.ರಂಗಯ್ಯ (ವಾಟರ್ ಇನ್ಸಪೆಕ್ಟರ್) | ಹಾಜರು |
| 16 | ಶ್ರೀ.ದೇವರಾಜ್ (ಅಂಬೇಡ್ಕರ್ ನಗರ) | ಹಾಜರು |
| 17 | ಶ್ರೀ.ಪುಷ್ಪರಾಜು (ಸದಸ್ಯರು) | ಹಾಜರು |
| 18 | ಶ್ರೀ.ರಮೇಶ್ | ಹಾಜರು |
| 19 | ಶ್ರೀ.ಅಭಿಲಾಷ್ ಜಿ ನಾಯರ್ | ಹಾಜರು |
| 20 | ಶ್ರೀಮತಿ.ರಜಿನಿ ಮಾದವನ್ | ಹಾಜರು |
| 21 | ಶ್ರೀಮತಿ ಕೆ.ರೇವತಿ | ಹಾಜರು |
| 22 | ಶ್ರೀ.ಎಸ್.ಅಮುಧ | ಹಾಜರು |
| 23 | ಶ್ರೀ.ಬಷೀರ್ ಅಹಮದ್ | ಹಾಜರು |
| 24 | ಶ್ರೀ.ನಾಗರಾಜ್ | ಹಾಜರು |
| 25 | ಶ್ರೀ.ಮಾಧವನ್ | ಹಾಜರು |

ದಿನಾಂಕ-22.06.2022 ರಂದು ಪೂರ್ವಾಹ್ನ 11.30 ಗಂಟೆ ಸಮಯದಲ್ಲಿ ಸಭೆಯನ್ನು ಪ್ರಾರಂಭಿಸಲಾಯಿತು. ಮೊದಲನೆಯನದಾಗಿ ಶ್ರೀಮತಿ.ತ್ರಿವೇಣಿ ಅಧ್ಯಕ್ಷರು ರವರು ಸಭೆಯಲ್ಲಿ ಹಾಜರಿರುವ ಸದಸ್ಯರುಗಳು ಮತ್ತು ಅಧಿಕಾರಿ ವೃಂಧದವರಿಗೆಲ್ಲಾ ಸ್ವಾಗತಕೋರಿದರು. ತದನಂತರ ಈ ಕೆಳಕಂಡ ವಿಷಯಗಳ ಬಗ್ಗೆ ಈ ಸಭೆಯಲ್ಲಿ ಚರ್ಚಿಸಲಾಯಿತು.

1. ಶ್ರೀ.ರಾಮಚಂದ್ರ (ಅಂಬೇಡ್ಕರ್‌ನಗರ) ರವರು ಮಾತನಾಡಿ ಅಂಬೇಡ್ಕರ್‌ನಗರ 1ನೇ ಅಡ್ಡರಸ್ತೆಯಲ್ಲಿನ ಚರಂಡಿಯಲ್ಲಿ ಹೂಳು ತುಂಬಿದ್ದು, ನೀರು ಸರಾಗವಾಗಿ ಹರಿಯದೇ, ರಸ್ತೆಯಲ್ಲಿ ಹರಿಯುತ್ತಿರುವುದರಿಂದ ಅಕ್ಕ ಪಕ್ಕದ ನಿವಾಸಿಗಳಿಗೆ ಬಹಳ ತೊಂದರೆಯಾಗುತ್ತಿರುತ್ತದೆ. ಇದರ ಬಗ್ಗೆ ಕ್ರಮ ವಹಿಸಲು ಸಭೆಯಲ್ಲಿ ಕೋರಿದರು.

ಕ್ರಮ:- ಸಭೆಯಲ್ಲಿ ಹಾಜರಿದ್ದ ಸಹಾಯಕ ಅಭಿಯಂತರರು ರವರಿಗೆ ಅಗತ್ಯ ಕ್ರಮವಹಿಸಲು ಸಭೆಯು ಸೂಚಿಸಿತು.

2 .ಶ್ರೀ.ಪುಷ್ಪರಾಜ್, ಸದಸ್ಯರು ರವರು ಮಾತನಾಡಿ ವಿಜಿನಾಪುರ ವಾರ್ಡ್ ವ್ಯಾಪ್ತಿಯಲ್ಲಿ ಅನೇಕ ಕೋಳಿ ಅಂಗಡಿಗಳು ಇದ್ದು, ಅಂಗಡಿಯ ಮಾಂಸದ ತ್ಯಾಜ್ಯವನ್ನು ಮೂಟೆಯಲ್ಲಿ ಕಟ್ಟಿ ರಸ್ತೆಯ ಬದಿಯಲ್ಲಿ ಬಿಸಾಡುತ್ತಿರುತ್ತಾರೆ. ಕೆಟ್ಟವಾಸನೆ ಬರುತ್ತಿದ್ದು, ಇದರಿಂದ ಸಾರ್ವಜನಿಕರಿಗೆ ತುಂಬಾ ತೊಂದರೆಯಗುತ್ತಿರುತ್ತದೆ. ಇಂತಹವರಿಗೆ ನೋಟೀಸ್ ನೀಡಿ ದಂಡ ವಿಧಿಸಬೇಕೆಂದು ಸಭೆಯಲ್ಲಿ ಕೋರಿದರು.

ಕ್ರಮ:- ಸಂಬಂಧಪಟ್ಟ ಅಧಿಕಾರಿಗಳಿಗೆ ಅಗತ್ಯ ಕ್ರಮ ವಹಿಸಲು ಸಭೆಯು ಸೂಚಿಸಿತು.

3. ಶ್ರೀ.ರಘು ಶೆಟ್ಟಿ (ಬಿ.ಡಿ.ಎ ಲೇಔಟ್) ರವರು ಮಾತನಾಡುತ್ತಾ, ಬಿ.ಡಿ.ಎ ಲೇಔಟ್ 3ನೇ ಅಡ್ಡರಸ್ತೆಯಲ್ಲಿ ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರ ಒಳಚರಂಡಿ ತುಂಬಿ ರಸ್ತೆಯ ಮೇಲೆ ಹರಿಯುತ್ತಿರುತ್ತದೆ. ಮತ್ತು ಬಿ.ಡಿ.ಎ ಲೇಔಟ್‌ನ ಬಿ.ಡಬ್ಲ್ಯೂ.ಎಸ್.ಎಸ್.ಬಿ ವಾಟರ್ ಟ್ಯಾಂಕ್ ರಸ್ತೆ ಮತ್ತು ಅಡ್ಡರಸ್ತೆಗಳಲ್ಲಿ ಕಾವೇರಿ ನೀರಿನ ಸಂಪರ್ಕಕ್ಕಾಗಿ ರಸ್ತೆಯನ್ನು ಅಗೆದಿರುತ್ತಾರೆ. ಸದರಿ ರಸ್ತೆಯನ್ನು ಸರಿಪಡಿಸಬೇಕಾಗಿ ಸಭೆಯಲ್ಲಿ ಕೋರಿದರು.

ಕ್ರಮ:- ಸಭೆಯಲ್ಲಿ ಹಾಜರಿದ್ದ ಸಹಾಯಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ ಅಧಿಕಾರಿಗಳಿಗೆ ಅಗತ್ಯ ಕ್ರಮ ವಹಿಸಲು ಸಭೆಯು ಸೂಚಿಸಿತು.

4. ಶ್ರೀ.ನಾಗರಾಜ್ ರವರು ಮಾತನಾಡಿ ಇಂದಿರಾ ಕ್ಯಾಂಟಿನ್ ರಸ್ತೆಯಲ್ಲಿರುವ ಆಟದ ಮೈದಾನದಲ್ಲಿ ಗಿಡಗಂಟೆಗಳು ಬೆಳೆದಿದ್ದು, ಇದನ್ನು ತೆರವುಗೊಳಿಸಲು ಕೋರಿದರು.

ಕ್ರಮ:- ಸಭೆಯಲ್ಲಿ ಹಾಜರಿದ್ದ ಸಹಾಯಕ ಅಭಿಯಂತರರು ಅಧಿಕಾರಿಗಳಿಗೆ ಅಗತ್ಯ ಕ್ರಮವಹಿಸಲು ಸಭೆಯು ಸೂಚಿಸಿತು.

5. ಶ್ರೀ.ವೇಣುಗೋಪಾಲ್ ರೈ ರವರು ಮಾತನಾಡಿ ಕಸ್ತೂರಿ ನಗರ ಸರ್ವೀಸ್ ರಸ್ತೆಯಲ್ಲಿ ಚರಂಡಿ ಹಾಳಾಗಿದ್ದು, ವಾಹನ ಸಂಚಾರರಿಗೆ ರಸ್ತೆಯಲ್ಲಿನ ಚರಂಡಿ ತಡೆಗೋಡೆ ಕಾಣದೆ ಇರುವುದರಿಂದ ಅಪಘಾತಗಳು ಸಂಭವಿಸುವ ಸಾಧ್ಯತೆ ಹೆಚ್ಚಾಗಿರುವುದರಿಂದ ತುರ್ತಾಗಿ ಕ್ರಮ ಕೈಗೊಳ್ಳಬೇಕೆಂದು ಸಬೆಯಲ್ಲಿ ಕೋರಿದರು.

ಕ್ರಮ:- ಸಂಬಂಧಪಟ್ಟ ಅಧಿಕಾರಿಗಳಿಗೆ ಅಗತ್ಯ ಕ್ರಮವಹಿಸಲು ಸಭೆಯು ಸೂಚಿಸಿತು.

ಸಭೆಯನ್ನು ಮುಕ್ತಾಯಗೊಳಿಸುವ ಸಲುವಾಗಿ ಕೊನೆಯದಾಗಿ ಅಧ್ಯಕ್ಷರು ರವರು ಸಲಹೆ ಸೂಚನೆಗಳನ್ನು ಚರ್ಚಿಸಿದ್ದಕ್ಕೆ ಧನ್ಯವಾದಗಳನ್ನು ತಿಳಿಸುತ್ತಾ, ವಾರ್ಡ್‌ನ್ನು ಅಭಿವೃದ್ದಿಪಡಿಸುವ ಬಗ್ಗೆ ವಾರ್ಡ್ ಮಟ್ಟದಲ್ಲಿ ಕಾರ್ಯ ಯೋಜನೆಯನ್ನು ರೂಪಿಸಿಕೊಂಡು ಕ್ರಮವಹಿಸುವುದಾಗಿ ತಿಳಿಸುತ್ತಾ, ಸಭೆಗೆ ಹಾಜರಾಗದ ಅಧಿಕಾರಿಗಳ ವಿರುದ್ಧ ಅಸಮಧಾನ ವ್ಯಕ್ತಪಡಿಸಿ ಮುಂದಿನ ಸಭೆಯಲ್ಲಿ ಎಲ್ಲರೂ ಹಾಜರಾಗಲೂ ಕ್ರಮಕೈಗೊಳ್ಳಲು ಕೋರಿಕೊಂಡಿದ್ದು, ಸಭೆಯನ್ನು ಮುಕ್ತಾಯಗೊಳಿಸುವ ಸಲುವಾಗಿ ಕೊನೆಯದಾಗಿ ಸಭೆಯಲ್ಲಿ ನುರಿತ ಸಲಹೆ ಸೂಚನೆಗಳನ್ನು ಚರ್ಚಿಸಿದ್ದಕ್ಕೆ ಧನ್ಯವಾದಗಳನ್ನು ತಿಳಿಸುತ್ತಾ, ವಾರ್ಡ್‌ನ್ನು ಸಮಗ್ರವಾಗಿ ಅಭಿವೃದ್ದಿಪಡಿಸುವ ಬಗ್ಗೆ ವಾರ್ಡ್ ಮಟ್ಟದಲ್ಲಿ ಕಾರ್ಯಯೋಜನೆಯನ್ನು ರೂಪಿಸಿಕೊಂಡು ಕ್ರಮವಹಿಸುವುದಾಗಿ ತಿಳಿಸುತ್ತಾ, ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಿದರು.

Knagali Mane 22/6/22

ವಾರ್ಡ್ ಸಮಿತಿ ಕಾರ್ಯದರ್ಶಿಗಳು,

ವಾರ್ಡ್ ನಂ.51, ವಿಜಿನಾಪುರ